**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.(ವಿಧಾನ ಸಭೆಯಿಂದ ಚುನಾಯಿತರಾದವರು) ಇವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:**

**ಪ್ರಶ್ನೆ :-** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಸಿಸಿಬಿ ಪೊಲೀಸರು ಇತ್ತೀಚೆಗೆ ದಾಳಿ ನಡೆಸಿ, ವಿವಿಧ ಬ್ಯಾರಕ್‌ಗಳಲ್ಲಿ ತಪಾಸಣೆ ನಡೆಸಿದಾಗ ಹಲವಾರು ರೀತಿಯ ನಿಷೇಧಿತ ವಸ್ತುಗಳು ವ್ಯಾಪಕವಾಗಿ ಪತ್ತೆಯಾಗಿರುವುದಾಗಿ ವರದಿಯಾಗಿದೆ. ಜೈಲಿನ ಒಳಗಡೆ ಹಲವು ಬಾರಿ ಈ ರೀತಿಯಲ್ಲಿ ವಿವಿಧ ರೀತಿಯ ನಿಷೇಧಿತ ವಸ್ತುಗಳು ಪದೇಪದೇ ಕಂಡುಬರುವುದು ನಿರಂತರವಾಗಿ ನಡೆಯುತ್ತಾ ಬಂದಿದೆ. ಹಣದ ಆಸೆಗೆ ಜೈಲು ಅಧಿಕಾರಿಗಳೇ ಕೈದಿಗಳ ಜೊತೆ ಶಾಮೀಲಾಗಿದ್ದು, ಈ ರೀತಿಯ ಅಕ್ರಮಗಳಿಗೆ ಸಂಪೂರ್ಣವಾಗಿ ಸಹಕರಿಸುತ್ತಾ ಬಂದಿದ್ದಾರೆ. ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಈ ರೀತಿಯ ನಿಷೇಧಿತ ವಸ್ತುಗಳು ಕಂಡುಬರುವುದು ಹಾಗೂ ಹಲವಾರು ರೀತಿಯ ಅಕ್ರಮ ಚಟುವಟಿಕೆಗಳು ಅವಿರತವಾಗಿ ನಡೆಯುತ್ತಿರುವ ಮಾಹಿತಿ ಇದ್ದರೂ, ಅದನ್ನು ತಡೆಯಲು ಮತ್ತು ಅವುಗಳಿಗೆ ಶಾಶ್ವತವಾಗಿ ಕಡಿವಾಣ ಹಾಕಲು ಹಾಗೂ ಈ ಅಕ್ರಮಗಳಲ್ಲಿ ಶಾಮೀಲಾಗಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಇದುವರೆಗೆ ಸಂಪೂರ್ಣವಾಗಿ ವಿಫಲವಾಗಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗೃಹ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:** ದಿನಾಂಕ:21-02-2026 ರಂದು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಸಿ.ಸಿ.ಬಿ. ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಅನಿರೀಕ್ಷಿತವಾಗಿ ಕಾರಾಗೃಹದ ವಿವಿಧ ವಿಭಾಗಗಳನ್ನು ತಪಾಸಣೆ ನಡೆಸಿದಾಗ ನಿಷೇಧಿತ ವಸ್ತುಗಳು ದೊರೆತ ಪ್ರಕರಣದಲ್ಲಿ 26 ಜನ ಬಂದಿಗಳ ವಿರುದ್ಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ:080/2026 ಕರ್ನಾಟಕ ಕಾರಾಗೃಹ (ತಿದ್ದುಪಡಿ) ಕಾಯ್ದೆ 2022 ರ ಕಲಂ 42 ಹಾಗೂ ಭಾರತೀಯ ನ್ಯಾಯ ಸಂಹಿತ (BNS) 2023 ಕಲಂ 323 ರಡಿಯಲ್ಲಿ ಪ್ರಕರಣ ದಾಖಲಿಸಲಾಗಿರುತ್ತದೆ.

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ಸೇರಿದಂತೆ ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ನಡೆದಿರುವ ಕಾನೂನು ಬಾಹಿರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ, ಬಂದಿಗಳಿಗೆ ನಿಯಮ ಬಾಹಿರವಾಗಿ ನಿಷೇಧಿತ ವಸ್ತುಗಳನ್ನು ಬಳಸುತ್ತಿರುವ ಬಗ್ಗೆ ಹಾಗೂ ಇತರೆ ಸವಲತ್ತುಗಳನ್ನು ಬಂದಿಗಳು ಪಡೆಯುತ್ತಿರುವ ಬಗ್ಗೆ ದೃಶ್ಯಮಾಧ್ಯಮಗಳಲ್ಲಿ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಕಳೆದ 05 ವರ್ಷಗಳಲ್ಲಿ ವರದಿ ಆಗಿರುವ ಎಲ್ಲಾ ವಿಡಿಯೋ/ ಆಡಿಯೋ ತುಣುಕುಗಳ ಕುರಿತು ಹಾಗೂ ಎಲ್ಲಾ ಕೇಂದ್ರ ಕಾರಾಗೃಹಗಳ ಪರಿಶೀಲನೆ /ವಿಚಾರಣೆ ನಡೆಸಿ, ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ರಚಿಸಲಾಗಿದ್ದ ಶ್ರೀ ಆರ್. ಹಿತೇಂದ್ರ, ಭಾ.ಪೊ.ಸೇ, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು (ಕಾನೂನು ಮತ್ತು ಸುವ್ಯವಸ್ಥೆ) ರವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಸದರಿ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳು ಬಳಸದಂತೆ ಹಾಗೂ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸರ್ಕಾರವು ಸದರಿ ಕಾರಾಗೃಹದ ಮುಖ್ಯ ಅಧೀಕ್ಷಕರ ಹುದ್ದೆಗೆ ಐ.ಪಿ.ಎಸ್ ಅಧಿಕಾರಿಯನ್ನು ನೇಮಿಸಿರುತ್ತದೆ.

ಬೆಂಗಳೂರು ಕೇಂದ್ರ ಕಾರಾಗೃಹದ ಭದ್ರತಾ ವ್ಯವಸ್ಥೆಯಲ್ಲಿ AI ತಂತ್ರಜ್ಞಾನವನ್ನು ಅಳವಡಿಸಲಾಗಿರುತ್ತದೆ. ಸದರಿ ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳ ಬಳಕೆ ತಡೆಗಟ್ಟಲು ಹಾಗೂ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಅತ್ಯಾಧುನಿಕ ಮಾದರಿಯ ತಪಾಸಣಾ

ಉಪಕರಣಗಳು ಹಾಗೂ ಹೆಚ್ಚುವರಿಯಾಗಿ ಸಿ.ಸಿ.ಟಿ.ವಿಗಳು, ಬ್ಯಾಗೇಜ್ ಸ್ಕ್ಯಾನರ್ ಗಳನ್ನು ಒದಗಿಸಲಾಗಿರುತ್ತದೆ.

ಬೆಂಗಳೂರು ಕೇಂದ್ರ ಕಾರಾಗೃಹ ಸೇರಿದಂತೆ ರಾಜ್ಯದ ಕಾರಾಗೃಹಗಳಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ ದೃಶ್ಯಾವಳಿಗಳನ್ನು ವೀಕ್ಷಿಸಲು ಪ್ರಧಾನ ಕಛೇರಿಯಲ್ಲಿ Command Center ಅನ್ನು ಸ್ಥಾಪಿಸಿ, ಬಂದಿಗಳ ಮತ್ತು ಸಿಬ್ಬಂದಿಗಳ ಚಲನವಲನಗಳನ್ನು ವೀಕ್ಷಿಸಲಾಗುತ್ತಿದ್ದು, ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ 05 ವರ್ಷ ಹಾಗೂ ಮೇಲ್ಪಟ್ಟು ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಬೆಂಗಳೂರು ಕೇಂದ್ರ ಕಾರಾಗೃಹವನ್ನು ಭದ್ರತಾ ದೃಷ್ಟಿಯಿಂದ 03 ಕೇಂದ್ರ ಕಾರಾಗೃಹಗಳನ್ನಾಗಿ 1) ಕೇಂದ್ರ ಕಾರಾಗೃಹ, ಶಿಕ್ಷಾ ಬಂದಿಗಳು, 2) ಕೇಂದ್ರ ಕಾರಾಗೃಹ, ವಿಚಾರಣಾ ಬಂದಿಗಳು ಹಾಗೂ 3) ಕೇಂದ್ರ ಕಾರಾಗೃಹ, ಮಹಿಳಾ ಬಂದಿಗಳು, ವಿಭಜಿಸಿ ಆಡಳಿತ ವಿಕೇಂದ್ರಿಕರಣ ಹಾಗೂ ಪರಿಣಾಮಕಾರಿ ಮೇಲ್ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಖಾಲಿಯಿರುವ ವೀಕ್ಷಕ ಹಾಗೂ ಜೈಲರ್ ಹುದ್ದೆಗಳನ್ನು ನೇಮಕಾತಿ ಮಾಡಲು ಕ್ರಮವಹಿಸಲಾಗಿರುತ್ತದೆ. ಕಾರಾಗೃಹದ ಹೊರ ಭಾಗದ ಉಸ್ತುವಾರಿ ಹೊಂದಿರುವ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ (ಕೆ.ಎಸ್.ಐ.ಎಸ್.ಎಫ್) ಅಧಿಕಾರಿ /ಸಿಬ್ಬಂದಿಗಳನ್ನು 06 ತಿಂಗಳಿಗೊಮ್ಮೆ ಬದಲಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಪೊಲೀಸ್ ಇಲಾಖಾವತಿಯಿಂದ ಅನಿರೀಕ್ಷಿತ ತಪಾಸಣೆಯನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದ್ದು, ಸದರಿ ತಪಾಸಣೆ ವೇಳೆಯಲ್ಲಿ ನಿಷೇಧಿತ ವಸ್ತುಗಳು ದೊರೆತಾಗ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗುತ್ತಿದೆ.

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಅಧಿಕಾರಿ/ಸಿಬ್ಬಂದಿಗಳು ದೈನಂದಿನ ಮತ್ತು ಅನಿರೀಕ್ಷಿತ ತಪಾಸಣೆಯನ್ನು ಕೈಗೊಳ್ಳುತ್ತಿದ್ದು, ನಿಷೇಧಿತ ವಸ್ತುಗಳು ದೊರೆತಲ್ಲಿ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗುತ್ತಿದೆ.

ಕಳೆದ 02 ವರ್ಷಗಳಿಂದ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳು ದೊರೆತ ಹಾಗೂ ಬಂದಿಗಳು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದ ವಿವಿಧ ಪ್ರಕರಣಗಳಲ್ಲಿ ಕರ್ತವ್ಯಲೋಪವೆಸಗಿದ 19 ಜನ ಅಧಿಕಾರಿ/ಸಿಬ್ಬಂದಿಗಳನ್ನು ಕರ್ತವ್ಯದಿಂದ ನಿಲಂಬನೆಗೊಳಿಸಲಾಗಿರುತ್ತದೆ ಮತ್ತು 50 ಅಧಿಕಾರಿ/ಸಿಬ್ಬಂದಿಗಳ ವಿರುದ್ಧ 1957 ಕೆ.ಸಿ.ಎಎಸ್( ಸಿ.ಸಿ.&ಎ) ನಿಯಮಾವಳಿಗಳನ್ವಯ ಶಿಸ್ತು ಕ್ರಮ ಕೈಗೊಳ್ಳಲಾಗಿರುತ್ತದೆ. 06 ಜನ ಸಿಬ್ಬಂದಿಗಳ ವಿರುದ್ಧ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿರುತ್ತದೆ.

**ಸಂಖ್ಯೆ ಹೆಚ್‌ಡಿ 49 ಪಿಆರ್‌ಇ 2026**

**(ಡಾ. ಜಿ. ಪರಮೇಶ್ವರ)**
ಗೃಹ ಸಚಿವರು